ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂಸತ್

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 12/12/2019

# ಪೌರತ್ವ ಶಾಸನಕ್ಕೆ ಸಂಸತ್ ಸಮ್ಮತಿ

## ಈಶಾನ್ಯ ರಾಜ್ಯಗಳಲ್ಲಿ ಭುಗಿಲೆದ್ದ ಹಿಂಸೆ

ಸಂ.ಕ. 12/12/19

**ನವದೆಹಲಿ:** ಭಾರೀ ವಿವಾದಕ್ಕೆ ಕಾರಣವಾಗಿರುವ ಪೌರತ್ವ ಕಾಯ್ದೆ ತಿದ್ದುಪಡಿ ಮಸೂದೆಗೆ ರಾಜ್ಯಸಭೆ ಅನುಮೋದನೆ ನೀಡುವ ಮೂಲಕ ಚಾರಿತ್ರಿಕ ಮಹತ್ವದ ಶಾಸನಕ್ಕೆ ಸಂಸತ್ ಅಂಗೀಕಾರ ಮುದ್ರೆ ಒತ್ತಿದೆ. ಏತನ್ಮಧ್ಯೆ ವಿಧೇಯಕ ವಿರೋಧಿಸಿ ದೇಶಾದ್ಯಂತ ಪ್ರತಿರೋಧ ವ್ಯಕ್ತವಾಗಿದ್ದು ವಿಶೇಷವಾಗಿ ಈಶಾನ್ಯ ಭಾರತದ ರಾಜ್ಯಗಳಲ್ಲಿ ವ್ಯಾಪಕ ಆಕ್ರೋಶ ಭುಗಿಲೆದ್ದಿದೆ.

- ಪೌರತ್ವ ಕಾಯ್ದೆ ತಿದ್ದುಪಡಿ ಮಸೂದೆಗೆ ರಾಜ್ಯಸಭೆಯ ಅಸ್ತು
- ಚಾರಿತ್ರಿಕ ಮಹತ್ವದ ಶಾಸನಕ್ಕೆ ಸಂಸತ್ ಅಂಗೀಕಾರ ಮುದ್ರೆ
- ಈಶಾನ್ಯ ಭಾರತದ ರಾಜ್ಯಗಳಲ್ಲಿ ಭುಗಿಲೆದ್ದ ಭಾರೀ ಆಕ್ರೋಶ

ಪೌರತ್ವ ಕಾಯ್ದೆ ವಿರೋಧಿಸಿ ಅಗರ್ತಲದಲ್ಲಿ ಪ್ರತಿಭಟನೆ ಮಾಡುತ್ತಿರುವ ನಾಗರೀಕರು




**ವಿಧೇಯಕ ರಾಜ್ಯಸಭೆ 125-105ರಿಂದ ಅಂಗೀಕಾರ**

ಅಸ್ಸಾಂ ರಾಜ್ಯದಲ್ಲಿ ಮಸೂದೆ ವಿರುದ್ಧ ಚಳವಳಿ ಉಗ್ರ ಸ್ವರೂಪಕ್ಕೆ ತಿರುಗಿದ್ದು ರಣರಂಗದ ವಾತಾವರಣ ಸೃಷ್ಟಿಯಾಗಿದೆ. ಸೇನೆಯನ್ನು ಸನ್ನದ್ಧ ಸ್ಥಿತಿಯಲ್ಲಿಡಲಾಗಿದ್ದು ರಾಜ್ಯಾದ್ಯಂತ ರಾತ್ರಿ ಕರ್ಫ್ಯೂ ಘೋಷಿಸಲಾಗಿದೆ. ಒಟ್ಟು 10 ಜಿಲ್ಲೆಗಳಲ್ಲಿ 24 ತಾಸುಗಳ ಕಾಲ ಇಂಟರ್‌ನೆಟ್ ಸೌಲಭ್ಯವನ್ನು ಸ್ಥಗಿತಗೊಳಿಸಲಾಗಿದೆ. ತ್ರಿಪುರಾ ರಾಜ್ಯದಲ್ಲೂ ಉದ್ವಿಗ್ನ ಪರಿಸ್ಥಿತಿ ತಲೆದೋರಿದ್ದು ಸೇನಾ ತುಕಡಿಗಳನ್ನು ನಿಯೋಜಿಸಲಾಗಿದೆ. ಅಲ್ಲದೆ ಒಟ್ಟು 5 ಸಾವಿರ ಅರೆಮಿಲಿಟರಿ ಪಡೆಗಳ ಸಿಬ್ಬಂದಿಯನ್ನು ಸಪ್ತ ಸಹೋದರಿ ರಾಜ್ಯಗಳಿಗೆ ರವಾನಿಸಲಾಗಿದೆ.

ಸೋಮವಾರ ನಡುರಾತ್ರಿ ಲೋಕಸಭೆಯಲ್ಲಿ ಬಹುಮತದಿಂದ ಅಂಗೀಕಾರವಾಗಿದ್ದ ತಿದ್ದುಪಡಿ ಮಸೂದೆಯನ್ನು ಕೇಂದ್ರ ಗೃಹಸಚಿವ ಅಮಿತ್ ಶಾ ಬುಧವಾರ ರಾಜ್ಯಸಭೆಯಲ್ಲಿ ಮಂಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ದೇಶದ ಮುಸ್ಲಿಂ ಬಾಂಧವರು ಇದರಿಂದ ಯಾವುದೇ ಆತಂಕಪಡಬೇಕಾಗಿಲ್ಲವೆಂದು ಭರವಸೆಯಿತ್ತರು. ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದಲ್ಲಿ ಧಾರ್ಮಿಕ ಕಿರುಕುಳಕ್ಕೆ ಗುರಿಯಾಗಿ ಭಾರತಕ್ಕೆ ವಲಸೆ ಬಂದಿರುವ ಮುಸ್ಲಿಮೇತರ ಅಲ್ಪಸಂಖ್ಯಾತರಿಗೆ ಪೌರತ್ವ ನೀಡುವ ಸದುದ್ದೇಶದಿಂದ ಸರ್ಕಾರ ಈ ಕ್ರಮ ಕೈಗೊಂಡಿರುವುದಾಗಿ ಶಾ ತಿಳಿಸಿದರು.

ಇನ್ನೊಂದೆಡೆ ಕಾಂಗ್ರೆಸ್ ಸೇರಿದಂತೆ ಅನೇಕ ಪ್ರತಿಪಕ್ಷಗಳ ನಾಯಕರು ಮಸೂದೆ ಸಂವಿಧಾನಬಾಹಿರವಾಗಿದ್ದು ದೇಶದ ಜನರನ್ನು ವಿಭಜಿಸುವ ಹುನ್ನಾರವಾಗಿದೆ ಎಂದು ಸರ್ಕಾರದ ವಿರುದ್ಧ ತೀವ್ರ ಟೀಕಾ ಪ್ರಹಾರ ನಡೆಸಿದರು. ವಿಷಯವನ್ನು ಸೆಲೆಕ್ಟ್ ಕಮಿಟಿಗೆ ಒಪ್ಪಿಸಬೇಕೆಂದು ವಿಪಕ್ಷಗಳು ಪಟ್ಟುಹಿಡಿದಾಗ ಸಭಾಪತಿ ವೆಂಕಯ್ಯನಾಯ್ಡು ಪ್ರಸ್ತಾಪವನ್ನು ಮತಕ್ಕೆ ಹಾಕಿದರು. ಆದರೆ ಆ ನಿರ್ಣಯಕ್ಕೆ ಸೋಲುಂಟಾಯಿತು. ಅಂತಿಮವಾಗಿ ಮಸೂದೆ ಪರವಾಗಿ 125 ಮತ್ತು ವಿರೋಧವಾಗಿ 105 ಮತಗಳು ಚಲಾಯಿಸಲ್ಪಟ್ಟವು. ಶಿವಸೇನೆ ಮತದಾನವನ್ನು ಬಹಿಷ್ಕರಿಸಿತು.